ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 21, 2020**

# ಪತ್ರಿಕಾ ಆಮಂತ್ರಣ

1. ಜಾಗತಿಕ ಜೀವವೈವಿಧ್ಯ ದಿನಾಚರಣೆ ಕಾರ್ಯಕ್ರಮ,

ಉದ್ಘಾಟನೆ :

ಬಿ. ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ : 22–05–2020 ಶುಕ್ರವಾರ ಸಮಯ : ಬೆಳಿಗ್ಗೆ 11–00 ಗಂಟೆಗೆ
ಸ್ಥಳ : ಕೃಷ್ಣಾ, ಮುಖ್ಯಮಂತ್ರಿಗಳ ಗೃಹ ಕಚೇರಿ, ಬೆಂಗಳೂರು

2. ವಸತಿ ಸಮುಚ್ಚಯದ ನಿರ್ಮಾಣ ಕಾಮಗಾರಿ ಪರಿವೀಕ್ಷಣೆ :

ವಿ. ಸೋಮಣ್ಣ,
ವಸತಿ ಸಚಿವರು

ದಿನಾಂಕ : 23–05–2020 ಶನಿವಾರ ಸಮಯ : ಬೆಳಿಗ್ಗೆ 10–00 ಗಂಟೆಗೆ
ಸ್ಥಳ : ಕೊಡತಿ, ಮಹದೇವಪುರ ವಿಧಾನಸಭಾ ಕ್ಷೇತ್ರ
(ರಾಜೀವ್‌ಗಾಂಧಿ ವಸತಿ ನಿಗಮದ ವತಿಯಿಂದ ನಿರ್ಮಾಣವಾಗುತ್ತಿರುವ
ವಸತಿ ಸಮುಚ್ಚಯ)

# ಪತ್ರಿಕಾ ಪ್ರಕಟಣೆ

## ರಾಜ್ಯವನ್ನು ಕೊರೋನಾ ಮುಕ್ತವಾಗಿಸಲು ಸರ್ಕಾರದೊಂದಿಗೆ ಪ್ರತಿಯೊಬ್ಬರು ಕೈಜೋಡಿಸಿಬೇಕು – ಮುಖ್ಯಮಂತ್ರಿ ಬಿ.ಎಸ್.ವೈ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ಎಲ್ಲಾ ವರ್ಗದ ಜನರಿಗೆ ಅತ್ಯುತ್ತಮ ಆರೋಗ್ಯ ಸೇವೆ ಒದಗಿಸುವುದು ಸರ್ಕಾರದ ಧ್ಯೇಯವಾಗಿದೆ. ಆರೋಗ್ಯ ಕ್ಷೇತ್ರಕ್ಕೆ ಮೂಲಸೌಕರ್ಯ ಒದಗಿಸಲು ನಮ್ಮ ಸರ್ಕಾರ ಆದ್ಯತೆ ನೀಡಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ಇಂದು ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರದ ಪ್ರಶಾಂತನಗರದ ವ್ಯಾಪ್ತಿಯಲ್ಲಿ ನೂತನವಾಗಿ ನಿರ್ಮಿಸಿರುವ 30 ಹಾಸಿಗೆಯ ಸಾಮರ್ಥ್ಯವುಳ್ಳ ಸುಸಜ್ಜಿತ ಹೆರಿಗೆ ಆಸ್ಪತ್ರೆಯ ಉದ್ಘಾಟನೆ ಹಾಗೂ ಅಗ್ರಹಾರ ದಾಸರಹಳ್ಳಿಯ ಎಂ.ಸಿ. ಬಡಾವಣೆಯಲ್ಲಿ 200 ಹಾಸಿಗೆಯ ಸಾಮರ್ಥ್ಯ ದ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಮುಖ್ಯ ಮಂತ್ರಿಗಳು, ಹೆರಿಗೆ ಆಸ್ಪತ್ರೆಯನ್ನು 7.00 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಿಸಲಾಗಿದೆ, ನವನಗರೋತ್ಥಾನ ಯೋಜನೆ ಅಡಿಯಲ್ಲಿ ರೂ. 35.00 ಕೋಟಿಗಳ ವೆಚ್ಚದಲ್ಲಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಓ.ಪಿ.ಡಿ ಬ್ಲಾಕ್, ಲ್ಯಾಬ್, ಫಾರ್ಮಸಿ, ತುರ್ತು ಚಿಕಿತ್ಸಾ ಘಟಕ, ಐ.ಸಿ.ಯು, ಓಟಿ, ಡಯಾಲಿಸಿಸ್ ಸೆಂಟರ್ ಎಕ್ಸರೇ ವಿಭಾಗ, ಕ್ಯಾಂಟೀನ್ ಹಾಗೂ ಜನರಲ್ / ಸ್ಪೆಷಲ್ ವಾರ್ಡ್‌ಗಳು ಆಧುನಿಕ ಸೌಲಭ್ಯಗಳನ್ನೊಳಗೊಂಡ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಇದಾಗಲಿದ್ದು, ಗೋವಿಂದರಾಜನಗರದ ವಿಧಾನಸಭಾ ಕ್ಷೇತ್ರದ ಸುತ್ತಮುತ್ತಲಿನ ಕಡು ಬಡವರಿಗೆ ಗುಣಮಟ್ಟದ ಚಿಕಿತ್ಸೆ ದೊರಲಿದೆ ಎಂದು ತಿಳಿಸಿದರು.

ಕೋವಿಡ್ – 19 ಸೋಂಕಿನ ಸಂಕಷ್ಟದ ಪರಿಸ್ಥಿತಿಯನ್ನು ರಾಜ್ಯ ಸರ್ಕಾರ ಉತ್ತಮವಾಗಿ ನಿರ್ವಹಿಸುತ್ತಿದೆ. ಕೊರೋನಾ ಹಿಡಿತದಿಂದ ರಾಜ್ಯವನ್ನು ತಪ್ಪಿಸಲು ಸರ್ಕಾರ ಎಲ್ಲಾ ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಸಾರ್ವಜನಿಕರೂ ಸಹ ಸರ್ಕಾರದ ಕ್ರಮಗಳಿಗೆ ಸ್ಪಂದಿಸಬೇಕು ಎಂದು ತಿಳಿಸಿದರು.

ವೈದ್ಯಕೀಯ ಸಿಬ್ಬಂದಿ ಕೋವಿಡ್ – 19ರ ಸಮರದಲ್ಲಿ ಮಂಚೂಣಿಯಲ್ಲಿರುವ ಯೋಧರು. ಕರ್ತವ್ಯನಿರತ ವೈದ್ಯಕೀಯ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಅಹಿತಕರ ಘಟನೆಗಳು ಸಂಭವಿಸಿದ್ದರೂ, ಎದೆಗುಂದದೆ, ಜೀವದ ಹಂಗು ತೊರೆದು ತಮ್ಮ ಸೇವೆಯನ್ನು ಮುಂದುವರೆಸುತ್ತಿರುವ ವೈದ್ಯರು ಮತ್ತಿತರ ಆರೋಗ್ಯ ಸಿಬ್ಬಂದಿಯನ್ನು ಅಭಿನಂದಿಸಿದರು.

ಕೊರೋನಾ ವಿರುದ್ಧದ ಹೋರಾಟದಲ್ಲಿ ತೊಡಗಿಕೊಂಡಿರುವ ವೈದ್ಯರು, ನರ್ಸ್‍ಗಳು, ಅರೆವೈದ್ಯಕೀಯ ಸಿಬ್ಬಂದಿ ತಂತ್ರಜ್ಞರು ಹಾಗೂ ಆಶಾ ಕಾರ್ಯಕರ್ತರಿಗೆ ಅಪಾಯ ಸಂಭವಿಸಿದರೆ 50 ಲಕ್ಷ ರೂ.ಗಳ ವಿಮೆಯನ್ನು ಕೇಂದ್ರ ಸರ್ಕಾರ ಘೋಷಿಸಿದೆ. ಆಶಾ ಕಾರ್ಯಕರ್ತೆಯರ ವಿಶೇಷ ಸೇವೆಯನ್ನು ಗುರುತಿಸಿ ರಾಜ್ಯ ಸರ್ಕಾರದ ವತಿಯಿಂದ ತಲಾ 3000 ರೂ.ಗಳ ಪ್ರೋತ್ಸಾಹ ಧನ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ವೈದ್ಯಕೀಯ ಸೇವೆಗಳ ಕ್ಷೇತ್ರದಲ್ಲಿ ಸುಸಜ್ಜಿತ ಸೌಕರ್ಯಗಳು ಅತಿ ಮುಖ್ಯ ಪಾತ್ರವನ್ನು ವಹಿಸುತ್ತದೆ. ಕೊರೋನಾ ಸೋಂಕಿನ ಹಿನ್ನೆಲೆಯಲ್ಲಿ ಇಂತಹ ಸುಸಜ್ಜಿತ ಕಟ್ಟಡಗಳ ನಿರ್ವಹಣೆ ಹಾಗೂ ಸ್ವಚ್ಛತೆ ಹಿಂದೆಂದಿಗಿಂತಲೂ ಹೆಚ್ಚಿನ ಮಹತ್ವ ಪಡೆದುಕೊಳ್ಳುತ್ತದೆ. ಆರೋಗ್ಯ ರಕ್ಷಕರು ಹಾಗೂ ಸ್ವಚ್ಛತಾ ಕಾರ್ಯಕರ್ತರ ಸೇವೆಯನ್ನು ಗುರುತಿಸಿ ಗೌರವಿಸೋಣ ಎಂದು ತಿಳಿಸಿದರು.

ಈ ಸಮಾರಂಭದಲ್ಲಿ ಕಂದಾಯ ಸಚಿವ ಆರ್. ಅಶೋಕ್, ವಸತಿ ಸಚಿವ ವಿ. ಸೋಮಣ್ಣ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ. ಗೋಪಾಲಯ್ಯ ಸೇರಿದಂತೆ ಹಲವಾರು ಸಚಿವರು ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ)

## ವಸತಿ ಸಚಿವರ ಪ್ರವಾಸ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ವಸತಿ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಮೇ 22, 2020 ರಂದು ಕೊಡಗು ಜಿಲ್ಲೆಗೆ ಪ್ರವಾಸ ಕೈಗೊಂಡು ಅಂದೇ ಬೆಂಗಳೂರಿಗೆ ಹಿಂದಿರುಗುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ

## ಪಕ್ಷಾಂತರ ನಿಷೇಧ ನಿಯಮಾವಳಿ ರೂಪಿಸಲು ತಜ್ಞರಿಂದ ಅಭಿಪ್ರಾಯ ಆಹ್ವಾನ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

**ಪಕ್ಷಾಂತರ ನಿಷೇಧಕ್ಕೆ ಸಂಬಂಧಿಸಿದಂತೆ ಸಂವಿಧಾನದ ಹತ್ತನೇ ಅನುಸೂಚಿಯಲ್ಲಿ ರಚಿಸಲಾಗಿರುವ ನಿಯಮಾವಳಿಗಳಲ್ಲಿನ ಅವಕಾಶಗಳು ಚರ್ಚೆಯ ವಿಷಯವಾಗಿರುವುದರಿಂದ ಸದರಿ ಅನುಸೂಚಿ ಹಾಗೂ**

ನಿಮಮಾವಳಿಗಳನ್ನು ಪರಿಶೀಲಿಸಲು ಲೋಕಸಭಾಧ್ಯಕ್ಷರು ಹಾಗೂ ಅಖಿಲ ಭರತ ಪೀಠಾಸೀನಾಧಿಕಾರಿಗಳ ಸಮ್ಮೇಳನಾಧ್ಯಕ್ಷರಾದ ಓಂ. ಬಿರ್ಲಾರವರು ರಾಜಸ್ಥಾನ ವಿಧಾನ ಸಭಾಧ್ಯಕ್ಷರಾದ ಡಾ. ಸಿ.ಪಿ.ಜೋಷಿ ರವರ ಅಧ್ಯಕ್ಷತೆಯಲ್ಲಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗೆಡೆ ಕಾಗೇರಿ ಹಾಗೂ ಒಡಿಶಾ ವಿಧಾನಸಭೆಯ ಸಭಾಧ್ಯಕ್ಷರಾದ ಡಾ. ಸೂರ್ಜ್ಯ ನಾರಾಯಣ ಪಾತ್ರೊ ರವರುಗಳನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸಿರುತ್ತಾರೆ. ಸದರಿ ಸಮಿತಿಯು ಪರಿಶೀಲನಾ ಕಾರ್ಯವನ್ನು ಕೈಗೆತ್ತಿಕೊಳ್ಳಲಿರುವುದರಿಂದ ಈ ದಿಸೆಯಲ್ಲಿ ಕಾನೂನು ತಜ್ಞರಿಂದ, ಅಭಿಪ್ರಾಯ ಪಡೆಯುವುದು ಸೂಕ್ತವೆಂದು ಭಾವಿಸಲಾಗಿದೆ. ಈ ದಿಸೆಯಲ್ಲಿ ಅಭಿಪ್ರಾಯವನ್ನು ನೀಡಬೇಕೆಂದು ಇಚ್ಛಿಸುವವರು ತಮ್ಮ ಅಭಿಪ್ರಾಯವನ್ನು ಶ್ರೀಮತಿ ಎಂ.ಕೆ. ವಿಶಾಲಾಕ್ಷಿ, ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ, ಕೊಠಡಿ ಸಂಖ್ಯೆ–121, ಮೊದಲನೆ ಮಹಡಿ, ವಿಧಾನಸೌಧ,ಬೆಂಗಳೂರು–560001. ಫ್ಯಾಕ್ಸ್: 080–22258301, ಇ–ಮೇಲ್: **secy-kla-kar@nic.in** ವಿಳಾಸಕ್ಕೆ ಖುದ್ದಾಗಿ, ಅಂಚೆ ಮೂಲಕ ಅಥವಾ ಇ–ಮೇಲ್ ಮಖಾಂತರವಾಗಲಿ ಜೂನ್ 10, 2020ರ ಸಂಜೆ 5.00 ಗಂಟೆ ಒಳಗಾಗಿ ನೀಡಬಹುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ದೇಣಿಗೆ

ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )

ಮುಖ್ಯಮಂತ್ರಿಗಳ ಕೋವಿಡ್ 19 ಪರಿಹಾರ ನಿಧಿಗೆ ಮಂಗಲಿಕಾ ಸಂಸ್ಥೆಯ ವತಿಯಿಂದ ರೂ.2.00 ಲಕ್ಷಗಳ ದೇಣಿಗೆಯ ಚೆಕ್‌ಅನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಹಸ್ತಾಂತರ ಮಾಡಲಾಯಿತು. ಸುಪ್ರಿಯಾ ಅಗರ್ವಾಲ್, ಕಲ್ಪನಾ ಗೋಯಂಕಾ ಹಾಗೂ ಸುಜಾತಾ ದಬ್ರಿವಾಲ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪ್ರಗತಿ ಪರಿಶೀಲನಾ ಸಭೆ

ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಕೈಗಾರಿಕಾ ಇಲಾಖೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಕಾರ್ಮಿಕ ಸಚಿವ ಶಿವರಾಮ್ ಹೆಬ್ಬಾರ್, ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಹಾಗೂ ಕೈಗಾರಿಕಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ದೇಣಿಗೆ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ಮುಖ್ಯಮಂತ್ರಿಗಳ ಕೋವಿಡ್ 19 ಪರಿಹಾರ ನಿಧಿಗೆ ಹಿಲ್‌ಕಲ್ ಜಿಗಣಿ ಲಿಮಿಟೆಡ್ ವತಿಯಿಂದ ರೂ. 2.50 ಲಕ್ಷಗಳ ದೇಣಿಗೆಯ ಚೆಕ್‌ನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಸಂಸ್ಥೆಯ ಅಧ್ಯಕ್ಷ ಮನೋಜ್ ಹಸ್ತಾಂತರ ಮಾಡಿದರು. ಸಂಸ್ಥೆಯ ಉಪ ವ್ಯವಸ್ಥಾಪಕ ಪಿ.ಎಸ್.ರಮೇಶ್ ಪದಾಧಿಕಾರಿಗಳಾದ ವಿದ್ಯಾನಂದಶೆಟ್ಟಿ, ಎಸ್.ಸುರೇಶ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ದೇಣಿಗೆ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ಮುಖ್ಯಮಂತ್ರಿಗಳ ಕೋವಿಡ್ 19 ಪರಿಹಾರ ನಿಧಿಗೆ ಬೇಸ್ ಎಜುಕೇಶನ್ ಮತ್ತು ಬೇಸ್ ಪಿ.ಯು.ಕಾಲೇಜ್ ನೌಕರರ ವತಿಯಿಂದ ರೂ. 11,11,111 ಗಳ ದೇಣಿಗೆಯ ಚೆಕ್‌ನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಹಸ್ತಾಂತರ ಮಾಡಲಾಯಿತು. ಬೇಸ್ ಸಮಸ್ಥೆಯ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಊಪಸ್ಥಿತರಿದ್ದರು.

## ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲು ಪೂರ್ವಾನುಮತಿ ಮಂಜೂರು

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ಕೋವಿಡ್-19 ರ ಲಾಕ್‌ಡೌನ್ ಹಾಗೂ ನಿಷೇದಾಜ್ಞೆ ಹಿನ್ನಲೆಯಲ್ಲಿ ಎಪ್ರಿಲ್ ಮಾಹೆ ಮತ್ತು ಮೇ ಮಾಹೆಯಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ನಿಷೇಧ ಹೇರಲಾಗಿರುತ್ತದೆ. ಬೆಂಗಳೂರು ನಗರದ ಸಿಸಿಬಿ ಘಟಕದಲ್ಲಿನ ಕೆಲ ಪೋಲೀಸ್ ಅಧಿಕಾರಿಗಳು ಖಾಸಗಿ ವ್ಯಕ್ತಿಗಳ ಸಹಾಯದಿಂದ ಕೆಲ ಡಿಸ್ಟ್ರಿಬ್ಯೂಟರ್ಸ್ ರವರೊಂದಿಗೆ ಸಂಪರ್ಕವಿರಿಸಿ ತಮ್ಮ ಅಧಿಕಾರವನ್ನು ದುರುಯೋಗಪಡಿಸಿಕೊಂಡು ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಅನುಮತಿ ನೀಡಿ ಲಂಚದ ಹಣ ಪಡೆದಿರುವುದು ಇಲಾಖಾ ಪೂರ್ವಾಭಾವಿ ವಿಚಾರಣೆ ವೇಳೆ ತಿಳಿದುಬಂದಿರುತ್ತದೆ.

ಇದೇ ರೀತಿ ಎನ್-95 ನಕಲಿ ಮಾಸ್ಕ್ ಮಾರಾಟ ಜಾಲದ ಬಗ್ಗೆ ಬಾಣಸವಾಡಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಆರೋಪಿಗಳಿಗೆ ಸಹಾಯ ಮಾಡುವ ನೆಪದಲ್ಲಿಯೂ ಸಹ ಲಂಚದ ಹಣ ಪಡೆದಿರುವುದು ಇಲಾಖಾ ಪೂರ್ವಾಭಾವಿ ವಿಚಾರಣೆ ವೇಳೆ ಕಂಡುಬಂದಿರುತ್ತದೆ.

ಈ ಮೇಲ್ಕಂಡ ಪ್ರಕರಣಗಳ ಕುರಿತಂತೆ ಮಾನ್ಯ ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾ ನಿರೀಕ್ಷಕರು, ಬೆಂಗಳೂರು ರವರ ಕಛೇರಿಯಿಂದ ಭ್ರಷ್ಟಾಚಾರ ನಿಗ್ರಹ ದಳಕ್ಕೆ ಬರೆದ ಪತ್ರದಂತೆ ತಂಬಾಕು ಉತ್ಪನ್ನಗಳ ಡಿಸ್ಟ್ರಿಬ್ಯೂಟರ್ಸ್ ರವರಿಂದ ಪಡೆದ ಲಂಚದ ಹಣದ ಕುರಿತು ಮತ್ತು ಎನ್-95 ನಕಲಿ ಮಾಸ್ಕ್ ಮಾರಾಟ ಜಾಲದ ಬಗ್ಗೆ ಬಾಣಸವಾಡಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿನ ಖಾಸಗಿ ವ್ಯಕ್ತಿಗಳಿಂದ ಪಡೆದಿರುವ ಲಂಚದ ಹಣದ  ಆರೋಪಗಳ ಕುರಿತು ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲು ಆರೋಪಿತ ಅಧಿಕಾರಿಗಳ ಸಕ್ಷಮ ಪ್ರಾಧಿಕಾರಕ್ಕೆ ಪತ್ರ ವ್ಯವಹರಿಸಿದ್ದು ಈ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲು ಪೂರ್ವಾನುಮತಿಯನ್ನು ನೀಡಲಾಗಿರುತ್ತದೆ.

ಎಂ.ಪ್ರಭುಶಂಕರ್, ಎಸಿಪಿ, ಆರ್ಥಿಕ ಅಪರಾದ ದಳ, ಸಿಸಿಬಿ, ಬೆಂಗಳೂರು ರವರು ಬೆಂಗಳೂರಿನಲ್ಲಿ ಸಿಗರೇಟ್‌ಗಳನ್ನು ಡಿಸ್ಟ್ರಿಬ್ಯೂಟ್ ಮಾಡುವ ಡಿಸ್ಟ್ರಿಬ್ಯೂಟಿಂಗ್ ಏಜೆನ್ಸಿಯ ಮಾಲೀಕರೊಬ್ಬರಿಂದ ಇವರ ಹಾಗು ಇತರೆ ಡಿಸ್ಟ್ರಿಬ್ಯೂಟರ್‌ಗಳ ಪರವಾಗಿ ಲಾಕ್‌ಡೌನ್ ಅವಧಿಯಲ್ಲಿ ನಗರದಾದ್ಯಂತ ಇರುವ ಅಂಗಡಿಗಳಿಗೆ ಹೆಚ್ಚಿನ ಬೆಲೆಗೆ ಸಿಗರೇಟ್‌ಗಳನ್ನು ವಿತರಿಸಿ ಅಕ್ರಮ ಲಾಭ ಮಾಡಿಕೊಳ್ಳಲು ಅನುವು ಮಾಡಿಕೊಟ್ಟು, ಸದರಿಯವರಿಂದ ಮಧ್ಯವರ್ತಿಗಳ ಮುಖೇನ ಲಂಚದ ಹಣವನ್ನು ಸ್ವೀಕರಿಸಿದ್ದು, ಈ ಬಗ್ಗೆ ಅರೋಪಿಗಳಾದ  ಎಂ.ಪ್ರಭುಶಂಕರ್, ಎಸಿಪಿ ಆರ್ಥಿಕ ಅಪರಾದ ದಳ, ಸಿಸಿಬಿ, ಬೆಂಗಳೂರು, ಇನ್ಸ್‌ಪೆಕ್ಟರ್‌ಗಳಾದ ಆರ್.ಎಂ.ಅಜಯ್ ಹಾಗು ನಿರಂಜನ್‌ಕುಮಾರ್ ಮತ್ತು ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿರುತ್ತದೆ.

ಎಂ.ಪ್ರಭುಶಂಕರ್, ಎಸಿಪಿ, ಆರ್ಥಿಕ ಅಪರಾದ ದಳ, ಸಿಸಿಬಿ, ಬೆಂಗಳೂರು ರವರು ಬೆಂಗಳೂರಿನ ಹನುಮಂತನಗರದಲ್ಲಿ ಡಿಸ್ಟ್ರಿಬ್ಯೂಟರ್ ಒಬ್ಬರನ್ನು ಸಿಸಿಬಿ ಕಚೇರಿಗೆ ಕರೆಯಿಸಿಕೊಂಡು ಲಾಕ್‌ಡೌನ್ ಅವಧಿಯಲ್ಲಿ ಅಕ್ರಮವಾಗಿ ಸಿಗರೇಟ್ ಮಾರಾಟ ಮಾಡುತ್ತಿರುವ ವಿಚಾರದಲ್ಲಿ ಲಂಚದ ಹಣಕ್ಕಾಗಿ ಒತ್ತಾಯಿಸಿ ಮಧ್ಯವರ್ತಿಯ ಮುಖೇನ ಲಂಚದ ಹಣವನ್ನು ಸ್ವೀಕರಿಸಿದ್ದು, ಈ ಬಗ್ಗೆ ಅರೋಪಿ ಎಂ.ಪ್ರಭುಶಂಕರ್, ಎಸಿಪಿ ಆರ್ಥಿಕ ಅಪರಾದ ದಳ, ಸಿಸಿಬಿ, ಬೆಂಗಳೂರು ಹಾಗು ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿರುತ್ತದೆ.

ಎನ್-೯೫ ನಕಲಿ ಮಾಸ್ಕ್ ಜಾಲದ ಕುರಿತಂತೆ ಬಾಣಸವಾಡಿ ಪೋಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಆರೋಪಿಗಳಿಗೆ ಸಹಾಯ ಮಾಡುವ ನೆಪದಲ್ಲಿ ಲಂಚದ ಹಣವನ್ನು ಸ್ವೀಕರಿಸಿದ್ದು, ಈ ಬಗ್ಗೆ ಎಂ.ಪ್ರಭುಶಂಕರ್, ಎಸಿಪಿ ಆರ್ಥಿಕ ಅಪರಾದ ದಳ, ಸಿಸಿಬಿ, ಬೆಂಗಳೂರು ಮತ್ತು ಇನ್ಸ್‌ಪೆಕ್ಟರ್ ಆರ್.ಎಂ.ಅಜಯ್ ಹಾಗು ಇತರರ ವಿರುದ್ಧ ಪ್ರಕರಣ ದಾಖಲಿಸಲಾಗಿರುತ್ತದೆ.

ಈ ಮೇಲ್ಕಂಡಂತೆ ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ನಗರ ಠಾಣೆಯಲ್ಲಿ ೩ ಪ್ರಕರಣಗಳು ದಾಖಲಾಗಿದ್ದು, ಪ್ರಕರಣದಲ್ಲಿ ಅಧಿಕಾರಿಗಳ ಮತ್ತು ಖಾಸಗಿ ವ್ಯಕ್ತಿಗಳ ಪಾತ್ರದ ಕುರಿತಂತೆ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

**ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಮೇ 22 ರಂದು ರಾಮನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.**

## ಕರ್ನಾಟಕ ಒನ್ ಕೇಂದ್ರಗಳು ಪುನರಾರಂಭ

**ಬೆಂಗಳೂರು, ಮೇ 21 ( ಕರ್ನಾಟಕ ವಾರ್ತೆ )**

ಕೋವಿಡ್ 19 ಲಾಕ್ ಡೌನ್ ಹಿನ್ನಲೆಯಲ್ಲಿ ಮುಚ್ಚಲಾಗಿದ್ದ ಕರ್ನಾಟಕ ಒನ್ ಕೇಂದ್ರಗಳು ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸೇವೆಗಳನ್ನು ಪ್ರಾರಂಭಿಸಿದೆ. ಈ ಕೇಂದ್ರಗಳು ಬೆಳಿಗ್ಗೆ 8-00 ರಿಂದ ಸಂಜೆ 6-00 ರ ವರೆಗೆ ತೆರೆದಿರುತ್ತದೆ. ಈ ಕೇಂದ್ರಗಳಲ್ಲಿ ವಿದ್ಯುತ್ ಬಿಲ್ ಪಾವತಿ, ನೀರಿನ ಬಿಲ್‌ಪಾವತಿ, ಆಸ್ತಿ ತೆರಿಗೆ, ಬಿ.ಎಸ್.ಎನ್.ಎಲ್ ದೂರವಾಣಿ ಬಿಲ್ ಸೇರಿದಂತೆ ಇತರ ಸೇವೆಗಳನ್ನು ಪಡೆದಯಬಹುದು. ಈ ಕೇಂದ್ರಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಸ್ಯಾನಿಟೈಸರ್ ಹಾಗೂ ಸಿಬ್ಬಂದಿಗಳಿಗೆ ಮಾಸ್ಕಗಳನ್ನು ಒದಗಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## Karnataka One Centres Re-opened

**Bengaluru May 21 (Karnataka Information)**

**Karnataka One integrated Citizen Service centers which were closed down due to Covid-19 lock down are re-opened.**

**All Karnataka One Centres have been cleaned and have been provided with sanitizers and masks have been provided to Karnataka one staff and all other measures have been take to prevent spread of Covid-19. These Centres are currently working from 8.00 AM to 6.00 P.M. Citizens can avail services namely Electricity bill payment, Water bill payment, Property tax payment, BSNL payment, etc says Official Press Release**